ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆಯ ಸೌಲಭ್ಯಗಳು:

769 (845); ಶ್ರೀ ಈಶ್ವರ ಭೀಮಣ್ಣ ಖಂಡ್ರೆ

(ಅ) ಬೀದರ್ ಜಿಲ್ಲಾ ಆಸ್ಪತ್ರೆಯಲ್ಲಿ ಇದೂವರೆವಿಗೂ ಹೃದಯ, ಕ್ಯಾನ್ಸರ್, ನ್ಯೂರೋ, ಮೂತ್ರಪಿಂಡ ಇನ್ನಿತರ ಖಾಯಿಲೆಗಳಿಗೆ ಚಿಕಿತ್ಸಾ ಸೌಲಭ್ಯ ವಿದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಜಿಲ್ಲಾ ಆಸ್ಪತ್ರೆಯಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನಾಗಿ ಪರಿವರ್ತಿಸಿ ಈ ಎಲ್ಲಾ ಖಾಯಿಲೆಗಳಿಗೆ ಚಿಕಿತ್ಸೆ ದೊರೆಯುವಂತೆ ಕ್ರಮ ಕೈಗೊಳ್ಳಲಾಗುವುದೇ?

ಡಾ: ಶರಣ ಪ್ರಕಾಶ್ ರುದ್ರಪ್ಪ ಪಾಟೀಲ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು)

(ಅ) ಬೀದರ್ ಜಿಲ್ಲಾ ಆಸ್ಪತ್ರೆಯಲ್ಲಿ ಹೃದಯ ಹಾಗೂ ಮೂತ್ರಪಿಂಡ ಖಾಯಿಲೆಗಳಿಗೆ ತಜ್ಞ ವೈದ್ಯರಿಂದ ಅಗತ್ಯವಿರುವ ಚಿಕಿತ್ಸಾ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

ಕ್ಯಾನ್ಸರ್ ಹಾಗೂ ನ್ಯೂರೋ ಖಾಯಿಲೆಗಳಿಗೆ ನುರಿತ ತಜ್ಞ ವೈದ್ಯರು ಹಾಗೂ ಚಿಕಿತ್ಸಾ ಸೌಲಭ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

(ಆ) ಬೀದರ್ ಜಿಲ್ಲಾ ಆಸ್ಪತ್ರೆಯನ್ನು 750 ಹಾಸಿಗೆಗಳ ಸಾಮರ್ಥ್ಯಕ್ಕೆ ಮೇಲ್ದರ್ಜೆಗೇರಿಸುವ ಕಟ್ಟಡ ಕಾಮಗಾರಿಯ `87.70 ಕೋಟಿಗಳ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾ ಗಿದೆ. ಸದರಿ ಜಿಲ್ಲಾ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಿದ ನಂತರ ಕ್ಯಾನ್ಸರ್ ಹಾಗೂ ನ್ಯೂರೋ ಖಾಯಿಲೆಗಳನ್ನೊಳಗೊಂಡಂತೆ ಇನ್ನಿತರೆ ಖಾಯಿಲೆ ಗಳಿಗೆ ಅಗತ್ಯವಿರುವ ಚಿಕಿತ್ಸೆಯನ್ನು ಒದಗಿಸುವ ಸಲುವಾಗಿ ನುರಿತ ತಜ್ಞ ವೈದ್ಯರುಗಳು ಹಾಗೂ ಚಿಕಿತ್ಸಾ ಸೌಲಭ್ಯಗಳನ್ನು ಒದಗಿಸಲಾಗುವುದು.